ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 27/9/2020

# ಭೂಸುಧಾರಣೆ ರೈತರಿಗೆ ಮರಣ ಶಾಸನ

## ಕಾರ್ಪೊರೇಟ್ ಕಂಪನಿಗಳೊಂದಿಗೆ ಸರ್ಕಾರ ಶಾಮೀಲು: ಸಿದ್ದು ಆರೋಪ

## ಇದು ರಾಜ್ಯ ಸರ್ಕಾರ ಕೃಷಿ ಕ್ಷೇತ್ರದ ಶವಪೆಟ್ಟಿಗೆಗೆ ಹೊಡೆದ ಕೊನೆ ಮೊಳೆ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ರಾಜ್ಯ ಸರ್ಕಾರವು ಜಾರಿಗೊಳಿಸುವ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವು ರೈತರ ಪಾಲಿಗೆ ಮರಣಶಾಸನವಾಗಲಿದ್ದು, ಕಾರ್ಪೊರೇಟ್ ಕಂಪನಿಗಳೊಂದಿಗೆ ಸರ್ಕಾರ ಶಾಮೀಲಾಗಿ ರೈತ ಸಮುದಾಯವನ್ನು ನಾಶ ಮಾಡಲು ಹೊರಟಿದೆ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದ್ದಾರೆ.

ಶನಿವಾರ ಭೂ ಸುಧಾರಣೆ (ತಿದ್ದುಪಡಿ) ವಿಧೇಯಕ ಪರ್ಯಾಲೋಚನೆ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವು ರೈತರನ್ನು ನಾಶ ಮಾಡುವುದಾಗಿದೆ. ಕಾಯ್ದೆಯ 79ಎ, ಬಿ ಮತ್ತು 80ನೇ ಕಲಂ ರದ್ದುಗೊಳಿಸಿ, ಕಲಂ 63ರಡಿ ನಿಗದಿಪಡಿಸಿರುವ ಭೂ ಒಡೆತನದ ಮಿತಿಯನ್ನು ದ್ವಿಗುಣಗೊಳಿಸುವ ರಾಜ್ಯ ಸರ್ಕಾರ ನಿರ್ಧಾರವು ರಾಜ್ಯದ ಆರ್ಥಿಕತೆಗೆ ಪೆಟ್ಟು ನೀಡಲಿದೆ. ಅಲ್ಲದೇ, ಕೃಷಿ ಕ್ಷೇತ್ರದ ಶವಪೆಟ್ಟಿಗೆಗೆ ಹೊಡೆದ ಕೊನೆ ಮೊಳೆಯಾಗಿದೆ. ಉದ್ಯಮಿಗಳು, ಬಹುರಾಷ್ಟ್ರೀಯ ಕಂಪನಿಗಳು ಮತ್ತು ರಿಯಲ್ ಎಸ್ಟೇಟ್ ವ್ಯಾಪಾರಿಗಳಿಗೆ ಸಹಾಯವಾಗಲು ರೈತರಿಗೆ ವಂಚನೆ ಮಾಡಲಾಗುತ್ತಿದೆ ಎಂದು ಟೀಕಾಪ್ರಹಾರ ನಡೆಸಿದರು.



ವಿಧೇಯಕಕ್ಕೆ ನಾವು ರಾಜಕೀಯ ಬಣ್ಣ ನೀಡುತ್ತಿಲ್ಲ. ಗ್ರಾಮೀಣ ಭಾಗದ ಆರ್ಥಿಕತೆ, ರೈತರ ಹಿತದೃಷ್ಟಿಯಿಂದ ಕಾನೂನು ಮಾಡಬೇಕು. ಆದರೆ, ಸರ್ಕಾರವು ತರಾತುರಿಯಲ್ಲಿ ಸುಗ್ರೀವಾಜ್ಞೆ ಮೂಲಕ ಜಾರಿಗೊಳಿಸಿತು. ಈ ವೇಳೆ ರೈತರು ಹಾಗೂ ಪ್ರತಿಪಕ್ಷದವರನ್ನು ಪರಿಗಣಿಸದೆ ಜಾರಿಗೊಳಿಸಿತು. ಅಂತಹ ಆತುರ ಏನಿತ್ತು? ಯಾವುದೇ ಸಂಘಟನೆಯಾಗಲಿ, ಸಂಘ-ಸಂಸ್ಥೆಯಾಗಲಿ ಇದಕ್ಕೆ ಬೇಡಿಕೆ ಇಟ್ಟಿರಲಿಲ್ಲ. ಸರ್ಕಾರವು ಭೂ ಸುಧಾರಣೆಯ ಆತ್ಮವನ್ನೇ ಕಿತ್ತು ಬಿಸಾಕಿದೆ. ಉಳುವವನೇ ಭೂ ಒಡೆಯ ಎಂಬುದನ್ನು ನಿರ್ಜೀವಗೊಳಿಸಲಾಗುತ್ತಿದೆ. ಕೃಷಿಯೇತರರಿಗೆ ಭೂಮಿ ಖರೀದಿ ನಿಷೇಧ ಇರುವುದನ್ನು ತೆಗೆದು ಹಾಕಿ ಭೂ ತಾಯಿಗೆ ದ್ರೋಹ ಎಸಗಿದೆ ಎಂದು ಕಿಡಿಕಾರಿದರು.

ಭೂ ಸುಧಾರಣಾ ಕಾಯ್ದೆಯಿಂದ ಭ್ರಷ್ಟಾಚಾರ ಹೆಚ್ಚಾಗಿದ್ದು, 79ಎ, ಬಿಯನ್ನು ಮುಂದಿಟ್ಟುಕೊಂಡು ಅಧಿಕಾರಿಗಳು ಲಂಚ ಪಡೆಯುತ್ತಿದ್ದಾರೆ ಎಂದು ಸರ್ಕಾರ ಹೇಳಿದೆ. ಲಂಚ ಎಲ್ಲಿ ಇಲ್ಲ? ತಹಶೀಲ್ದಾರ್, ಸಬ್ ರಿಜಿಸ್ಟ್ರಾರ್ ಕಚೇರಿ, ಪೊಲೀಸ್ ಠಾಣೆಯಲ್ಲಿ ಲಂಚ ಇಲ್ಲವೇ? ನಿರ್ಮೂಲನೆ ಮಾಡಬೇಕಾಗಿರುವುದು ಲಂಚವನ್ನೋ ಅಥವಾ ಕಾನೂನನ್ನೋ? ಅಧಿಕಾರಿಗಳು ಲಂಚಕೋರರಾಗಿದ್ದರೆ ಸರ್ಕಾರ ಅವರನ್ನು ನಿಯಂತ್ರಿಸಲು ವಿಫಲವಾಗಿದೆ ಎಂದರ್ಥ. ರೈತ ವಿರೋಧಿಯಾಗಿರುವ ವಿಧೇಯಕವನ್ನು ಪ್ರತಿಪಕ್ಷದವರು ಮಾತ್ರವಲ್ಲ, ಆಡಳಿತ ಪಕ್ಷದ ಸದಸ್ಯರಲ್ಲಿ ಆತ್ಮಸಾಕ್ಷಿ ಇದ್ದರೆ ಅವರೂ ಸಹ ವಿರೋಧಿಸಬೇಕು. ಭೂ ಸುಧಾರಣೆ ಕಾಯ್ದೆಯ ಉಲ್ಲಂಘನೆ ಮಾಡಿರುವ 13,814 ಪ್ರಕರಣಗಳು ರಾಜ್ಯದ ನ್ಯಾಯಾಲಯದಲ್ಲಿವೆ. ಪ್ರಸ್ತುತ ವಿಧೇಯಕದಿಂದ ಈ ಎಲ್ಲಾ ಪ್ರಕರಣಗಳು ರದ್ದಾಗಲಿವೆ. ಅಕ್ರಮವೆಲ್ಲ ಸಕ್ರಮವಾಗಲಿದೆ. ಭೂಗಳ್ಳರನ್ನು ರಕ್ಷಿಸಲು ವಿಧೇಯಕ ಜಾರಿ ಮಾಡಲಾಗುತ್ತಿದೆ ಎಂದು ಕಿಡಿ ಕಾಡಿದರು.